ಶ್ರೀ ಎಂ. ವೀರಪ್ಪಮೊಯಿಲಿ (ಶಿಕ್ಷಣ ಸಚಿವರು):-

ಅ) ಬಂದಿದೆ.

ಆ) ಕಣತೂರು ಗ್ರಾಮಕ್ಕೆ 1991-92ನೇ ಸಾಲಿನಿಂದ ಸರ್ಕಾರಿ ಪ್ರೌಢಶಾಲೆ ಮಂಜೂರು ಮಾಡಿದೆ.

ಇ) ಉದ್ಭವಿಸುವುದಿಲ್ಲ.

ಜೋಯಿಡಾಕ್ಕೆ ರಾಜ್ಯ ರಸ್ತೆ ಸಾರಿಗೆ ಬಸ್ ನಿಲ್ದಾಣ ಮಂಜೂರಾತಿ

467 (776). ಶ್ರೀ ಆರ್.ವಿ. ದೇಶಪಾಂಡೆ (ಹಳಿಯಾಳ):- ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಉತ್ತರ ಕನ್ನಡ ಜಿಲ್ಲೆಯ ಜೋಯಿಡಾಯಕ್ಕೆ ರಾಜ್ಯ ರಸ್ತೆ ಸಾರಿಗೆ ಬಸ್ ನಿಲ್ದಾಣ ಮಂಜೂರಾಗಿರುವುದು ನಿಜವಲ್ಲವೇ?

ಆ) ಹಾಗಿದ್ದಲ್ಲಿ ನಿಲ್ದಾಣ ನಿರ್ಮಿಸುವ ಸಲುವಾಗಿ ಜಾಗವನ್ನು ಎಲ್ಲಿ ಸ್ವಾಧೀನಪಡಿಸಿಕೊಳ್ಳಲಾಗಿದೆ. ಇದಕ್ಕೆ ತಗಲುವ ವೆಚ್ಚವೆಷ್ಟು?

ಇ) ಯಾವಾಗ ನಿಲ್ದಾಣದ ಕೆಲಸ ಪ್ರಾರಂಭಿಸಲಾಗುವುದು?

ಶ್ರೀ ಅಜೀಜ್ ಸೇಠ್ (ಸಾರಿಗೆ ಸಚಿವರು):-

ಅ) ನಿಜ.

ಆ) ನ್ಯೂಟೌನ್ ನಲ್ಲಿ ಸ್ವಾಧೀನ ಪಡಿಸಿಕೊಳ್ಳಲಾಗಿದೆ. ಇದಕ್ಕೆ ತಗಲುವ ವೆಚ್ಚ 7.00 ಲಕ್ಷ ರೂ.ಗಳು

ಇ) ದಿನಾಂಕ 19-12-1991ರಂದು ಟೆಂಡರ್ ಕರೆಯಲಾಗಿದೆ. ಟೆಂಡರ್‌ಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ 31-1-1992ರಂದು ನಿಗದಿ ಮಾಡಲಾಗಿತ್ತು, ಇವುಗಳನ್ನು ಪರಿಶೀಲಿಸಲಾಗುತ್ತಿದೆ. ಸದ್ಯವಲ್ಲೇ ಕೆಲಸವನ್ನು ಪ್ರಾರಂಭಿಸಲಾಗುವುದು.

ದಾಂಡೇಲಿಯಿಂದ ಸಾವಂತವಾರಿ ಹಾಗೂ ಮಾಪ್ಸಗಳ ನಡುವೆ ರಸ್ತೆ ಸಾರಿಗೆ ವ್ಯವಸ್ಥೆ

468 (777). ಶ್ರೀ ಆರ್.ವಿ. ದೇಶಪಾಂಡೆ (ಹಳಿಯಾಳ):- ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಉತ್ತರ ಕನ್ನಡ ಜಿಲ್ಲೆಯ ದಾಂಡೇಲಿಯಿಂದ ಮಾಪ್ಸ ಹಾಗೂ ಸಾವಂತವಾರಿಗಳ ನಡುವೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಬಸ್ಸು ಸಂಚಾರವನ್ನು ಏರ್ಪಡಿಸುವಂತೆ ಕೋರಿ ಮನವಿಗಳೇನಾದರೂ ಬಂದಿದೆಯೇ?

ಆ) ಹಾಗಿದ್ದಲ್ಲಿ ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು?

ಇ) ಈ ಬೇಡಿಕೆಯನ್ನು ಈಡೇರಿಸಲು ಸರ್ಕಾರವು ಅಂತರ ರಾಜ್ಯ ಬಸ್ ಸಂಚಾರವನ್ನು ಪ್ರಾರಂಭಿಸಲು ಸೂಕ್ತ ಕ್ರಮ ಕೈಗೊಳ್ಳುವುದೇ?

ಶ್ರೀ ಅಜೀಜ್ ಸೇಠ್ (ಸಾರಿಗೆ ಸಚಿವರು):-

ಅ) ಹೌದು.

ಆ) ಮಹಾರಾಷ್ಟ್ರ ಮತ್ತು ಗೋವ ರಾಜ್ಯಗಳೊಂದಿಗೆ ನಡೆಯುವ ಮುಂದಿನ ಅಂತರ ರಾಜ್ಯ ಸಾರಿಗೆ ಒಪ್ಪಂದದಲ್ಲಿ ಈ ಮಾರ್ಗಗಳನ್ನು ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಇ) ಈ ಮಾರ್ಗಗಳು ಅಂತರ ರಾಜ್ಯ ಸಾರಿಗೆ ಒಪ್ಪಂದದಲ್ಲಿ ಸೇರಿಸಿದ ನಂತರ ಸಾರಿಗೆ ಸಂಚಾರದ ವ್ಯವಸ್ಥೆ ಮಾಡಲಾಗುವುದು.

ರಾಜ್ಯ ರಸ್ತೆ ಸಾರಿಗೆ ಬಸ್ ದರದ ಹೆಚ್ಚಳ

469 (778). ಶ್ರೀ ಆರ್. ವಿ. ದೇಶಪಾಂಡೆ (ಹಳಿಯಾಳ):- ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಬಸ್ ದರಗಳನ್ನು ಏರಿಸಲು ನಿರ್ಧರಿಸಿರುವುದು ನಿಜವೇ?

ಆ) ಹಾಗಿದ್ದಲ್ಲಿ ಯಾವ ಪ್ರಮಾಣದಲ್ಲಿ ಬಸ್ ದರಗಳನ್ನು ಏರಿಸಲಾಗುವುದು?

ಇ) ಈ ದರ ಏರಿಕೆ ಎಂದಿನಿಂದ ಜಾರಿಗೆ ಬರುವುದು?

ಶ್ರೀ ಅಜೀಜ್ ಸೇಠ್ (ಸಾರಿಗೆ ಸಚಿವರು):-

ಅ) ಹೌದು.

ಆ) ಈ ವಿಷಯವು ಪರಿಶೀಲನೆಯಲ್ಲಿದೆ.

ಇ) (ಆ)ಕ್ಕೆ ನೀಡಿರುವ ಉತ್ತರದಿಂದ ಉದ್ಭವಿಸುವುದಿಲ್ಲ.

ಹಸಿರು ಕಾರ್ಡಿನ ಬಣ್ಣ ಬದಲಾವಣೆ

470 (779). ಶ್ರೀ ಆರ್.ವಿ. ದೇಶಪಾಂಡೆ (ಹಳಿಯಾಳ):- ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ರಾಜ್ಯದಲ್ಲಿರುವ ಹಸಿರು ಕಾರ್ಡುಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಅಂಕಿ ಅಂಶಗಳನ್ನು ಮಾಡುವುದು)

ಆ) ರಾಜ್ಯ ಸರ್ಕಾರವು ಹಸಿರು ಕಾರ್ಡುಗಳ ಬಣ್ಣವನ್ನು ಬದಲಾಯಿಸಿ ಆದರಲ್ಲಿ ಮಾಜಿ ಪ್ರಧಾನಿಗಳಾದ ಶ್ರೀಮತಿ ಇಂದಿರಾ ಗಾಂಧಿಯವರ ಭಾವಚಿತ್ರವನ್ನು ಮುದ್ರಿಸಲು ತೀರ್ಮಾನಿಸಿರುವುದು ನಿಜವೇ? ಹಾಗಿದ್ದಲ್ಲಿ ಇದಕ್ಕಾಗಿ ತಗಲುವ ವೆಚ್ಚವೆಷ್ಟು?

ಶ್ರೀ ಟಿ.ಎನ್. ನರಸಿಂಹ ಮೂರ್ತಿ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು):-

ಅ) 31,14,608.

(ಜಿಲ್ಲಾವಾರು ವಿವರ ಅನುಬಂಧ ಅನಲ್ಲಿ ಲಗತ್ತಿಸಿದೆ.)

ಆ) ನಿಜ. ಹೊಸ ಪಡಿತರ ಚೀಟಿಗಳನ್ನು ಮುದ್ರಿಸಿ ವಿತರಣೆ ಮಾಡಲು ಸರ್ಕಾರವು ರೂ. 1.75 ಕೋಟಿ ರೂ. ಗಳನ್ನು ಖರ್ಚು ಮಾಡಲಿದೆ.